# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1437
2. ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 30-12-2022
4. ಉತ್ತರಿಸುವ ಸಚಿವರು : ಮಾನ್ಯ ಕಾರ್ಮಿಕ ಸಚಿವರು

| ಕ್ರ.ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ | ರಾಜ್ಯದ ಕೈಗಾರಿಕೆಗಳಲ್ಲಿ ಮತ್ತು ವಾಣಿಜ್ಯ ಕ್ಷೇತ್ರಗಳಲ್ಲಿ ಬಾಲಕಾರ್ಮಿಕರನ್ನು ನೇಮಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ಬಾಲಕಾರ್ಮಿಕ ನೇಮಕವನ್ನು ತಡೆಗಟ್ಟಲು ಸರ್ಕಾರ ಕಠಿಣ ಕ್ರಮ ಕೈಗೊಳ್ಳದಿರಲು ಕಾರಣವೇನು; | ರಾಜ್ಯದ ಕೈಗಾರಿಕೆಗಳಲ್ಲಿ ಮತ್ತು ವಾಣಿಜ್ಯ ಕ್ಷೇತ್ರಗಳಲ್ಲಿ ಬಾಲಕಾರ್ಮಿಕರನ್ನು ನೇಮಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>ರಾಜ್ಯದಲ್ಲಿ ಬಾಲಕಾರ್ಮಿಕ ನೇಮಕವನ್ನು ತಡೆಗಟ್ಟಲು ಸರ್ಕಾರವು ಪ್ರಮುಖ ಕಠಿಣ ಕ್ರಮಗಳನ್ನು ಕೈಗೊಂಡಿರುತ್ತದೆ. ಕೈಗೊಂಡ ಕ್ರಮಗಳು ಈ ಕೆಳಕಂಡಂತಿರುತ್ತವೆ;<br>• ಪ್ರತಿ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಗಳನ್ನು, ಬಾಲಕಾರ್ಮಿಕ ಮತ್ತು ಕಿಶೋರಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸ್ಥಾಪಿಸಲಾಗಿರುತ್ತದೆ.<br>• ಬಾಲಕಾರ್ಮಿಕ ಮತ್ತು ಕಿಶೋರಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ಕಲಂ-16 ಹಾಗೂ ಕಲಂ-17 ರಡಿಯಲ್ಲಿ ನಿರೀಕ್ಷಕರುಗಳನ್ನು ಅಧಿಸೂಚಿಸಿ ಅವರ ಮೂಲಕ ತಪಾಸಣೆ, ಬಿಡುಗಡೆ ಹಾಗೂ ಪುನರ್ವಸತಿಯ ಕಾನೂನು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>• ಸರ್ಕಾರದ ಆದೇಶ ಸಂಖ್ಯೆ: ಎಲ್‌ಡಿ 86 ಸಿಎಲ್‌ಸಿ 2012, ದಿನಾಂಕ: 20-10-2012 ರನ್ವಯ ಬಾಲಕಾರ್ಮಿಕ ಪದ್ಧತಿಯನ್ನು ಪರಿಣಾಮಕಾರಿಯಾಗಿ ನಿರ್ಮೂಲನೆ ಮಾಡುವ ಸಲುವಾಗಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಲಹಾ ಸಮಿತಿ, ಕಾರ್ಯಕಾರಿ ಸಮಿತಿಗಳನ್ನು ಹಾಗೂ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ಬಾಲಕಾರ್ಮಿಕ ನಿರ್ಮೂಲನೆ ಹಾಗೂ ಪುನರ್ವಸತಿ ಸಮಿತಿಗಳನ್ನು ರಚಿಸಿ ಅಧಿಸೂಚನೆ ಹೊರಡಿಸಲಾಗಿರುತ್ತದೆ.<br>• ಹೋಬಳಿ ಮಟ್ಟದಲ್ಲಿ ಮತ್ತು ತಾಲ್ಲೂಕು ಮಟ್ಟದಲ್ಲಿ ಬಾಲ್ಯಾವಸ್ಥೆ ಮತ್ತು ಕಿಶೋರವಸ್ಥೆ ಕಾರ್ಮಿಕರ ತಪಾಸಣೆ/ದಾಳಿ ನಡೆಸಲು ತಂಡಗಳನ್ನು ರಚಿಸಲಾಗಿದೆ. ತಂಡಗಳು ದಾಳಿ / ತಪಾಸಣೆಗಳನ್ನು ನಡೆಸುತ್ತಿರುತ್ತಾರೆ. ಹಿರಿಯ ಕಾರ್ಮಿಕ ನಿರೀಕ್ಷಕರು/ ಕಾರ್ಮಿಕ ನಿರೀಕ್ಷಕರುಗಳು ತಪಾಸಣೆ ನಡೆಸುತ್ತಿದ್ದು, ಕಾಯ್ದೆಯನ್ನು ಉಲ್ಲಂಘಿಸಿರುವ ಮಾಲೀಕರ/ಸಂಸ್ಥೆಗಳ ವಿರುದ್ಧ ಮೊಕದ್ದಮೆ ದಾಖಲಿಸಲಾಗುತ್ತಿದೆ. |

| | | |
|---|---|---|
| | | • ರಾಜ್ಯವನ್ನು ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆ ಕಾರ್ಮಿಕರ ಮುಕ್ತ ರಾಜ್ಯವನ್ನಾಗಿ ರೂಪಿಸಲು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಬೀದಿ ನಾಟಕ, ಗೋಡೆ ಬರಹ, ಮಹಿಳಾ ಸ್ವಯಂ ಸೇವಾ ಸಂಘದ ಸದಸ್ಯರಿಗೆ ತರಬೇತಿ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಜೊತೆ ಸೇರಿ ಕಾನೂನು ಅರಿವು ನೆರವು ಕಾರ್ಯಕ್ರಮಗಳನ್ನು ನಡೆಸಲಾಗಿದೆ.<br>• ಪ್ರತಿ ಪಂಚಾಯಿತಿಗಳಲ್ಲಿ, ವಾರ್ಡ್‌ಗಳಲ್ಲಿ ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆ ಕಾರ್ಮಿಕರ ಮುಕ್ತ ವಲಯಗಳನ್ನಾಗಿ ಮಾಡಲು ವಿವಿಧ ಇಲಾಖೆಯ ಅಧಿಕಾರಿಗಳಿಗೆ ಹಾಗೂ ಸೆಕ್ಷನ್-17ರಡಿ ಮತ್ತು ಸೆಕ್ಷನ್-16ರಡಿ ನೇಮಕಗೊಂಡ ನಿರೀಕ್ಷಕರಿಗೆ ತರಬೇತಿ ಕಾರ್ಯಕ್ರಮಗಳನ್ನು ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಗಳ ಮೂಲಕ ಆಯೋಜಿಸಲಾಗುತ್ತಿದೆ. |
| ಆ | ರಾಜ್ಯದಲ್ಲಿ ಬಾಲಕಾರ್ಮಿಕ ನಿರ್ಮೂಲನೆಗೆ ಹಮ್ಮಿಕೊಂಡಿರುವ ಯೋಜನೆಗಳು ಯಾವುವು; ಅವುಗಳನ್ನು ಅನುಷ್ಠಾನಗೊಳಿಸಲು ಹಾಗೂ ಸಮಾಜದಲ್ಲಿ ಜಾಗೃತಿ ಮೂಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ರಾಜ್ಯದಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರನ್ನು ಕೆಲಸದಿಂದ ಬಿಡುಗಡೆಗೊಳಿಸಿ ಪುನರ್ವಸತಿಗೊಳಿಸುವ ಸಲುವಾಗಿ ಕಾರ್ಮಿಕ ಇಲಾಖೆ ವತಿಯಿಂದ ರಾಜ್ಯದ 31 ಜಿಲ್ಲೆಗಳಲ್ಲಿ ರಾಜ್ಯ ಬಾಲಕಾರ್ಮಿಕ ಯೋಜನೆ(ಎಸ್.ಸಿ.ಎಲ್.ಪಿ)ಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಗಳ ಮೂಲಕ ಮೇಲ್ವಿಚಾರಣೆ ನಡೆಸಿ ಜಾರಿಗೊಳಿಸಲಾಗುತ್ತಿದೆ.<br>ರಾಜ್ಯ ಬಾಲಕಾರ್ಮಿಕ ಯೋಜನೆ(ಎಸ್.ಸಿ.ಎಲ್.ಪಿ) ಯನ್ನು ಅನುಷ್ಠಾನಗೊಳಿಸಲು ಹಾಗೂ ಸಮಾಜದಲ್ಲಿ ಬಾಲಕಾರ್ಮಿಕ ಪದ್ಧತಿ ಕುರಿತು ಜಾಗೃತಿ ಮೂಡಿಸಲು ಇರುವ ಮಾನದಂಡಗಳು ಈ ಕೆಳಕಂಡಂತಿರುತ್ತವೆ;<br>• ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರಡಿಯ ಬಾಲಕಾರ್ಮಿಕ(ನಿಷೇಧ ಮತ್ತು ನಿಯಂತ್ರಣ) (ಕರ್ನಾಟಕ) ತಿದ್ದುಪಡಿ ನಿಯಮಗಳು-2017 ಅನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವುದು.<br>• ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ (ನಿಷೇಧ ಹಾಗೂ ನಿಯಂತ್ರಣ) ಕಾಯ್ದೆ, 1986 ಅನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವುದು. ಸದರಿ ಕಾಯ್ದೆಯನ್ವಯ ಎಲ್ಲಾ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ ಹಾಗೂ 14-18 ರ ಮಕ್ಕಳನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕಿಶೋರಾವಸ್ಥೆಯ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ. |

| | | |
|---|---|---|
| | | • ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ(ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986ರ ಪ್ರಾವಧಾನದನ್ವಯ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರನ್ನು ನಿಯೋಜಿಸಿಕೊಂಡಲ್ಲಿ ಅಂತಹ ಮೊದಲ ಅಪರಾಧಕ್ಕೆ ತಪ್ಪಿತಸ್ಥ ಮಾಲಿಕರಿಗೆ 6 ತಿಂಗಳಿನಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆ, ರೂ. 20,000/- ರಿಂದ ರೂ. 50.000/- ರವರೆಗೆ ದಂಡ ಅಥವಾ ಎರಡನ್ನೂ ವಿಧಿಸಲು ಅವಕಾಶವಿರುತ್ತದೆ. ಪುನರಾವರ್ತಿತ ಅಪರಾಧಕ್ಕೆ 1 ವರ್ಷದಿಂದ 3 ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸಲು ಅವಕಾಶವಿರುತ್ತದೆ. ಪೋಷಕರಾಗಿದ್ದಲ್ಲಿ ಲಘು ಶಿಕ್ಷೆ ಪ್ರಾವಧಾನವಿದ್ದು, ಪುನರಾವರ್ತಿತ ಅಪರಾಧಕ್ಕೆ ರೂ.10,000/- ಗಳ ದಂಡವನ್ನು ಸಕ್ಷಮ ನ್ಯಾಯಾಲಯವು ವಿಧಿಸಬಹುದಾಗಿರುತ್ತದೆ.<br><br>• ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ ಪದ್ಧತಿಯ ನಿರ್ಮೂಲನೆ ಕುರಿತು ವ್ಯಾಪಕವಾದ ಜಾಗೃತಿ ಮೂಡಿಸಲು ಬೀದಿನಾಟಕಗಳು, ಗೋಡೆ ಬರಹಗಳು, ಕರಪತ್ರಗಳು, ಆಟೋ ಪ್ರಚಾರಗಳು, ತರಬೇತಿ ಕಾರ್ಯಾಗಾರಗಳು, ಬಿತ್ತಿ ಪತ್ರಗಳು ಹಾಗೂ ಕಾನೂನು ಅರಿವು-ನೆರವು ಕಾರ್ಯಕ್ರಮಗಳ ನಿರಂತರ ಆಯೋಜನೆ ಹಾಗೂ ಸಾಂಪ್ರದಾಯಿಕ ಮಾಧ್ಯಮಗಳು ಹಾಗೂ ಆಧುನಿಕ ವಿದ್ಯುನ್ಮಾನ/ ಮುದ್ರಣ ಮಾಧ್ಯಮಗಳನ್ನು ಬಳಸಿಕೊಂಡು ರಾಜ್ಯದಾದ್ಯಂತ ಈ ಬಗ್ಗೆ "ಅರಿವು-ನೆರವು" ಕಾರ್ಯವನ್ನು ಎಲ್ಲಾ ಜಿಲ್ಲೆಗಳಲ್ಲಿ ಆಯಾ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ನಡೆಸಲಾಗುತ್ತಿದೆ.<br><br>• ಜಿಲ್ಲೆಯಾದ್ಯಂತ ನಿರಂತರವಾಗಿ ಬಾಲಕಾರ್ಮಿಕರ ಅನಿರೀಕ್ಷಿತ ತಪಾಸಣೆಗಳು / ದಾಳಿಗಳನ್ನು ನಡೆಸಿ, ತಪಾಸಣೆಗಳಲ್ಲಿ / ದಾಳಿಗಳಲ್ಲಿ ಪತ್ತೆಯಾದ ಬಾಲಕಾರ್ಮಿಕರನ್ನು ಮಕ್ಕಳ ಕಲ್ಯಾಣ ಸಮಿತಿ (Child Welfare Committee)ಯ ಬಾಲಕರ ಮತ್ತು ಬಾಲಕಿಯರ ಬಾಲಮಂದಿರಗಳಿಗೆ ಮತ್ತು ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಿಗೆ, ಮುಖ್ಯವಾಹಿನಿ ಶಾಲೆಗಳಲ್ಲಿ ಮಕ್ಕಳ ಅರ್ಹತೆಗನುಗುಣವಾಗಿ ದಾಖಲು ಮಾಡಲಾಗುತ್ತದೆ. |

**ಸಂಖ್ಯೆ: ಕಾಇ 52 ಸಿಎಲ್‌ಸಿ 2022**

(ಅರಬೈಲ್ ಶಿವರಾಮ್ ಹೆಬ್ಬಾರ್)
ಕಾರ್ಮಿಕ ಸಚಿವರು